ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದಿಂದ ಹುಲಸೂರು ವಿಧಾನ ಸಭಾ ಕ್ಷೇತ್ರದಲ್ಲಿ ಸೇತುವೆಗಳ ದುರಸ್ತಿ ಹಾಗೂ ಸೇತುವೆ ನಿರ್ಮಾಣ

2159 (2885)

ಶ್ರೀ ರಾಜೇಂದ್ರ ವರ್ಮ (ಹುಲಸೂರು): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮವನ್ನು ಎಂದು ಸ್ಥಾಪಿಸಲಾಯಿತು ಇದರ ಸ್ಥಾಪನೆಯ ಉದ್ದೇಶಗಳೇನು?

ಆ) ಈ ನಿಗಮವು ರಸ್ತೆ ಅಭಿವೃದ್ಧಿಗೆ ಹಾಗೂ ಸೇತುವೆ ದುರಸ್ತಿ ಮತ್ತು ನಿರ್ಮಾಣದ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಈಗಾಗಲೇ 200 ಕೋಟಿ ರೂ.ಗಳನ್ನು ಸಂಗ್ರಹ ಮಾಡಿರುವುದು ನಿಜವಲ್ಲವೇ?

ಇ) ಹಾಗಿದ್ದಲ್ಲಿ ಈ ರಸ್ತೆ ಅಭಿವೃದ್ಧಿ ನಿಗಮದಿಂದ ಈ ಹಣಕಾಸು ವರ್ಷದಲ್ಲಿ ಹುಲಸೂರು ವಿಧಾನ ಸಭಾ ಕ್ಷೇತ್ರದಲ್ಲಿ ಯಾವ ರಸ್ತೆಗಳ ದುರಸ್ತಿ ಸೇತುವೆ ದುರಸ್ತಿ ಹಾಗೂ ಹೊಸ ಸೇತುವೆಗಳ ನಿರ್ಮಾಣ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗುವುದು?

ಈ) ಇದಕ್ಕಾಗಿ ವೆಚ್ಚ ಮಾಡಲಾಗುವ ಹಣವೆಷ್ಟು?

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು):

ಅ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮವನ್ನು ಆಗಸ್ಟ್ 1999ರಲ್ಲಿ ಸ್ಥಾಪಿಸಲಾಯಿತು. ರಾಜ್ಯದಲ್ಲಿನ ರಸ್ತೆ ಮತ್ತು ಸೇತುವೆಗಳ ಅಭಿವೃದ್ಧಿ ಕಾರ್ಯವನ್ನು ವಿವಿಧ ಹಣಕಾಸು ಸಂಸ್ಥೆಗಳ ಆರ್ಥಿಕ ಸಾಲ ಸಹಾಯದಡಿ ಇಲ್ಲವೆ ಸಾರ್ವಜನಿಕ ಸಾಲದಿಂದ ಕೈಗೊಳ್ಳುವುದು ಇದರ ಉದ್ದೇಶವಾಗಿದೆ.

ಆ) ಹುಡ್ಕೊ ಸಂಸ್ಥೆಯಿಂದ 200 ಕೋಟಿ ರೂ ಸಾಲ ಪಡೆಯಲು ಒಪ್ಪಂದ ಮಾಡಿಕೊಳ್ಳಲಾಗಿದೆ.

ಇ) ಹುಲಸೂರು ಮತಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಕಾಮಗಾರಿಯ ಪ್ರಸ್ತಾವನೆ ಇರುವುದಿಲ್ಲ.

ಈ) ಉದ್ಭವಿಸುವುದಿಲ್ಲ.